## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ; 682
2. ವಿಧಾನ ಪರಿಷತ್ತ ಸದಸ್ಯರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
3. ಉತ್ತರಿಸ ಬೇಕಾದ ದಿನಾಂಕ : 04.03.2021
4. ಉತ್ತರಿಸ ಬೇಕಾದ ಸಚಿವರು : ಮುಖ್ಯ ಮಂತ್ರಿ

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಅನುದಾನಿತ ಶಾಲಾ ಕಾಲೇಜುಗಳಲ್ಲಿ 2015ನೇ ಸಾಲಿನವರೆಗೆ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಹಾಗೂ 1986 ರಿಂದ 1995ನೇ ಸಾಲಿನವರೆಗಿನ ಕನ್ನಡ ಮಾಧ್ಯಮ ಶಾಲೆಗಳಿಗೆ ಹೊಸದಾಗಿ ವೇತನಾನುದಾನಕ್ಕೆ ಒಳಪಡಲು ಸರ್ಕಾರಕ್ಕೆ ಬಂದಿರುವ ಪ್ರಸ್ತಾವನೆಗಳಿಗೆ ಆರ್ಥಿಕ ಇಲಾಖೆಯಿಂದ ಆರ್ಥಿಕ ಮಿತಿವ್ಯಯ ಕಾರಣ ನೀಡಿ ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ದಿನಾಂಕ:31.12.2015ರೊಳಗೆ ಮರಣ/ನಿವೃತ್ತಿ/ ವರ್ಗಾವಣೆ ಹಾಗೂ ಇನ್ನಿತರ ಕಾರಣಗಳಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡಲು ಕಲ್ಪಿಸಿರುವ ಅವಕಾಶವನ್ನು ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8/2020, ದಿನಾಂಕ:10.06.2020 ರನ್ವಯ 2020-21ನೇ ಸಾಲಿನಲ್ಲಿ ಭರ್ತಿ ಮಾಡುವುದನ್ನು ತಾತ್ಕಾಲಿಕವಾಗಿ ತಡೆಹಿಡಿಯಲಾಗಿರುತ್ತದೆ. |
| (ಆ) | ಸದರಿ ನೇಮಕಾತಿ ಪ್ರಕ್ರಿಯೆಯಲ್ಲಿರುವ ಬೋಧಕರಿಗೆ ವಯೋಮಿತಿ ಮೀರುತ್ತಿರುವುದರಿಂದ ಅವರು ತೊಂದರೆಗೊಳಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಖಾಸಗಿ ಅನುದಾನಿತ ಪ್ರೌಢಶಾಲೆ, ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳಲ್ಲಿ ದಿನಾಂಕ: 31.12.2015ರ ಅಂತ್ಯಕ್ಕೆ ವಿವಿಧ ಕಾರಣಗಳಿಂದ ಖಾಲಿ ಉಂಟಾಗಿರುವ ಹುದ್ದೆಗಳ ಪೈಕಿ ಈಗಾಗಲೇ ಸರ್ಕಾರದಿಂದ ಅನುಮೋದನೆಗೊಂಡು ನೇಮಕಾತಿ ಪ್ರಕ್ರಿಯೆಯು ಇಲಾಖೆಯಲ್ಲಿ ಅಂತಿಮ ಹಂತದಲ್ಲಿ ಬಾಕಿ ಇರುವ ಕ್ರಮವಾಗಿ 257, 173 ಮತ್ತು 340 ಬೋಧಕ ಹುದ್ದೆಗಳಿಗೆ ನೇಮಕಾತಿ ಆದೇಶವನ್ನು 2021-22ನೇ ಶೈಕ್ಷಣಿಕ ವರ್ಷ ಪ್ರಾರಂಭಗೊಂಡ ನಂತರ ನೀಡಲು ಸಹಮತಿಸಲಾಗಿರುತ್ತದೆ. |
| (ಇ) | ಹಾಗಾದಲ್ಲಿ ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರಗಳೊಂದಿಗೆ ಮಾಹಿತಿ ಒದಗಿಸುವುದು.) | |
| (ಈ) | ಯಾವ ಕಾಲಮಿತಿಯಲ್ಲಿ ಆರ್ಥಿಕ ಮಿತವ್ಯಯವನ್ನು ಸಡಿಲಿಸಿ, ಸದರಿ ಕಡತಗಳಿಗೆ ಮಂಜೂರಾತಿ ನೀಡಲಾಗುವುದು; | |

ಬಿ.ಎಸ್. ಯಡಿಯೂರಪ್ಪ

ಸಂಖ್ಯೆ:ಆಇ 48 ವೆಚ್ಚ-8/2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ